ಮಧುಗಿರಿಯ ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ ನ್ಯಾಯಾಲಯದಲ್ಲಿ

**<u>ಸಿ.ಸಿ. ಸಂಖ್ಯೆ 74/2023</u>**

ಪ್ರ.ವ.ಬೋ.ತಾಃ 23-04-2026

ಚಾಸಾಃ 9 ಫ್ರಾಸಾಃ 9

| | |
|---|---|
| ಸಾಕ್ಷಿಯ ಹೆಸರು | ಕೃಷ್ಣಪ್ಪ |
| ತಂದೆ/ಗಂಡನ ಹೆಸರು | ಮಲ್ಲೇಶಯ್ಯ |
| ವಯಸ್ಸು | 53 ವರ್ಷ |
| ವೃತ್ತಿ | ವ್ಯವಸಾಯ |
| ವಾಸ | ಮುದ್ದಯ್ಯನಪಾಳ್ಯ, ಮಧುಗಿರಿ ತಾ. |

**<u>ಮುಖ್ಯ ವಿಚಾರಣೆಃ- ಮಾನ್ಯ ಸ.ಸ.ಅ. ರವರಿಂದಃ-</u>**

ನಾನು 2005 ರಿಂದ 2010 ರವರೆಗೆ ಬ್ಯಾಲ್ಯ ಗ್ರಾಮ ಪಂಚಾಯಿತಿಯ ಸದಸ್ಯನಾಗಿದ್ದೆನು. ನಮ್ಮ ಗ್ರಾಮ ಪಂಚಾಯಿತಿವತಿಯಿಂದ 2009 ನೇ ಸಾಲಿನಲ್ಲಿ ಚಾಸಾ.5 ರವರು ಸರ್ಕಾರಿ ಗ್ರಾಮ ಠಾಣಾ ವ್ಯಾಪ್ತಿಯಿಂದ ಒಂದು ನಿವೇಶನವನ್ನು ಮಂಜೂರು ಮಾಡಬೇಕೆಂದು ಕೋರಿ ಅರ್ಜಿ ಸಲ್ಲಿಸಿದ್ದರು. ಅದರಂತೆ ಗ್ರಾಮ ಸಭೆಯಲ್ಲಿ ಆ ಅರ್ಜಿಯನ್ನು ಮಂಡಿಸಿ 30 x 40 ಅಳತೆಯ ನಿವೇಶನವನ್ನು ಮಂಜೂರು ಮಾಡಲಾಗಿತ್ತು. ಅದೇ ವರ್ಷ ಚಾಸಾ.5 ರವರು ಮನೆ ಕಟ್ಟಿಕೊಳ್ಳಲು ಹಣ ಮಂಜೂರು ಮಾಡುವಂತೆ ಕೋರಿ ಅರ್ಜಿ ಸಲ್ಲಿಸಿದು, ಅದರಂತೆ ಮನೆ ಕಟ್ಟಿಕೊಳ್ಳಲು ನಾಲ್ಕು ಕಂತಿನಲ್ಲಿ ಹಣ ಬಿಡುಗಡೆ ಮಾಡಲಾಗಿತ್ತು. ಆದರೆ ಎಷ್ಟು ಹಣ ಮಂಜೂರಾಗಿತ್ತು ಎಂಬುದು ನನಗೆ ಗೊತ್ತಿಲ್ಲ. ಚಾಸಾ.4 ರವರು ನಮ್ಮ ಗ್ರಾಮ ಪಂಚಾಯಿತಿಯಲ್ಲಿ ಬಿಲ್ ಕಲೆಕ್ಟರ್ ಆಗಿ ಕೆಲಸ ಮಾಡುತ್ತಿದ್ದರು.

(ಈ ಹಂತದಲ್ಲಿ ಮಾನ್ಯ ಸಸಅ ರವರ ವಿನಂತಿ ಮೇರೆಗೆ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು)

**<u>ಪಾಟೀ ಸವಾಲುಃ</u>– ಮಾನ್ಯ ಸ.ಸ.ಅ. ರವರಿಂದಃ–**

ಚಾಸಾ.5 ರವರು 2001–02 ನೇ ಸಾಲಿನಲ್ಲಿ ಲಿಡ್ಕರ್ ವಸತಿ ಯೋಜನೆಯಡಿಯಲ್ಲಿ ಹಂಧ್ರಾಳು ಯೋಜನೆಯಡಿ ಮನೆ ಕಟ್ಟಿಕೊಳ್ಳಲು ರೂ.10,000/– ಹಣವನ್ನು ಬ್ಯಾಲ್ಯ ಗ್ರಾಮ ಪಂಚಾಯಿತಿಯಿಂದ ಪಡೆದುಕೊಂಡಿದ್ದರು ಎಂದರೆ ನನಗೆ ಗೊತ್ತಿಲ್ಲ. 2013–14 ನೇ ಸಾಲಿನಲ್ಲಿ ಇಂದಿರಾ ಆವಾಜ್ ಯೋಜನೆಯಡಿ ಚಾಸಾ.5 ರವರು ಮನೆ ಕಟ್ಟಿಕೊಳ್ಳಲು ಒಟ್ಟು ರೂ.1,19,800/– ಹಣ ಸರ್ಕಾರದಿಂದ ಮಂಜೂರಾಗಿತ್ತು ಎಂದರೆ ಸರಿ.

**<u>ಪಾಟೀ ಸವಾಲುಃ</u>– 2 ನೇ ಆರೋಪಿಯ ಪರವಾಗಿ ಶ್ರೀ. ಆರ್.ಆರ್. ವಕೀಲರಿಂದಃ–**

ಆ ಅವಧಿಯಲ್ಲಿ ನರಸಿಂಹಮೂರ್ತಿ ಎಂಬುವವರು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಾಗಿದ್ದರು. ಆ ಹಣ ಮಂಜೂರಾದ ಸಮಯದಲ್ಲಿಯೂ ಸಹ ನರಸಿಂಹಮೂರ್ತಿರವರೇ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಾಗಿದ್ದರು.

ಈ ಹಂತದಲ್ಲಿ 1 ನೇ ಆರೋಪಿ ಪರ ವಕೀಲರು 2 ನೇ ಆರೋಪಿ ಪರ ವಕೀಲರು ಮಾಡಿದ ಪಾಟೀ ಸವಾಲನ್ನೇ ಅಳವಡಿಸಿಕೊಳ್ಳಲು ಕೋರಿರುತ್ತಾರೆ.

<u>ಮರು ವಿಚಾರಣೆಃ</u>– ಇಲ್ಲಾ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ನುಡಿದಂತೆ ಗಣಕೀಕೃತಗೊಳಿಸಲಾಯಿತು)

ಓ.ಹೇ.ಸಾ.ಸ.ಇ.ಒ.

ಪ್ರಧಾನ ಹಿರಿಯ ಸಿವಿಲ್ ಜಡ್ಜ್
ಮತ್ತು ಜೆಎಂಎಫ್‌ಸಿ, ಮಧುಗಿರಿ